**Bangalore**
**Regional News**
**04.04.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಎತ್ತಿನಹೊಳೆ ಯೋಜನೆ; ಜಲ ಜೀವನ್ ಮಿಷನ್ ನಡಿ ನೆರವು ನೀಡಲು ಕೇಂದ್ರಕ್ಕೆ ಒತ್ತಾಯ

೨. ಹಂಪಿಯಲ್ಲಿ ಅಖಿಲ ಭಾರತ ಸಮಗ್ರ ಹಣಕಾಸು ಸಲಹೆಗಾರರ ಸಮ್ಮೇಳನ; ರಕ್ಷಣಾ ಇಲಾಖೆಯ ಕಾರ್ಯದರ್ಶಿ ಭಾಗಿ

೩. ಬಿಜೆಪಿಯ ಕಾರ್ಯಕರ್ತನ ಹತ್ಯ ಪ್ರಕರಣ; ಸಿಬಿಐ ತನಿಖೆಗೆ ಪ್ರತಿಪಕ್ಷ ಬಿಜೆಪಿ ಆಗ್ರಹ

೪. ರಾಜ್ಯದ ಹಲವೆಡೆ ಮುಂದಿನ ಎರಡು ದಿನ ಗುಡುಗ ಸಹಿತ ಮಳೆ ನಿರೀಕ್ಷೆ- ಹವಮಾನ ಇಲಾಖೆ ಮುನ್ಸೂಚನೆ

**<><*<><>*><>**

ಎತ್ತಿನ ಹೊಳೆ ಯೋಜನೆಗೆ ಸಂಬಂಧಿಸಿದಂತೆ ಜಲಜೀವನ್ ಮಿಷನ್‌ನಡಿ ನೆರವು ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿರುವುದಾಗಿ ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಎತ್ತಿನ ಹೊಳೆ ಯೋಜನೆ ಸೇರಿದಂತೆ ರಾಜ್ಯದ ವಿವಿಧ ನೀರಾವರಿ ಯೋಜನೆಗಳ ಅನುಷ್ಠಾನ ಕುರಿತು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರೊಂದಿಗಿನ ಸಭೆಯಲ್ಲಿ ಚರ್ಚಿಸಿರುವುದಾಗಿ ತಿಳಿಸಿದ್ದಾರೆ.

**<><*<><>*><>**

ವಿಜಯನಗರದ ಹಂಪಿಯಲ್ಲಿ ಎರಡು ದಿನಗಳ ಅಖಿಲ ಭಾರತ ಸಮಗ್ರ ಹಣಕಾಸು ಸಲಹೆಗಾರರ ಸಮ್ಮೇಳನದ ಸಮಾರೋಪ ಸಮಾರಂಭ ನಡೆಯಿತು. ಈ ವೇಳೆ ರಕ್ಷಣಾ ಸಚಿವಾಲಯದ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್, ರಕ್ಷಣಾ ಲೆಕ್ಕಪತ್ರಗಳ ಮಹಾ ನಿಯಂತ್ರಕ ಡಾ.ಮಯಾಂಕ್ ಶರ್ಮ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ರಾಜೇಶ್ ಕುಮಾರ್ ಸಿಂಗ್, ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣದ ಸಂಕಲ್ಪ ತೊಟ್ಟಿರುವ ಪ್ರಧಾನಿ ನರೇಂದ್ರ ಮೋದಿ ಅವರ ಕನಸಿಗೆ ಪೂರಕವಾಗಿ ರಕ್ಷಣಾ ಲೆಕ್ಕಪತ್ರಗಳ ಮಹಾನಿಯಂತ್ರಣಾಲಯದ ಪಾತ್ರ ಹಿರಿದು. ಜೊತೆಗೆ ಹಣಕಾಸು ವಿಷಯದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ಜೊತೆಗೆ ಸಶಸ್ತ್ರ ಪಡೆಗಳು ಮತ್ತಷ್ಟು ಗುಣಮಟ್ಟದ ಸೇವೆ ನೀಡುವಲ್ಲಿ ಪ್ರಮುಖ ಪಾತ್ರ ವಹಿಸುವ ವಿಶ್ವಾಸವಿದೆ ಎಂದರು. ರಕ್ಷಣಾ ಸಚಿವಾಲಯಕ್ಕೆ ಕಳೆದ ಬಾರಿಯ ಮುಂಗಡಪತ್ರದಲ್ಲಿ ನೀಡಿದ್ದ ಅನುದಾನಕ್ಕಿಂತಲೂ ಈ ಬಾರಿ ಹೆಚ್ಚಿನ ಅನುದಾನ ನೀಡಲಾಗಿದೆ. ಹಣಕಾಸಿನ ವಿಷಯದಲ್ಲಿ ರಕ್ಷಣಾ ಲೆಕ್ಕಪತ್ರಗಳ ನಿಯಂತ್ರಣಾಲಯ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದೆ. ಈ ಮೂಲಕ ಆರ್ಥಿಕ ಶಿಸ್ತನ್ನು ಕಾಪಾಡುವುದರ ಜೊತೆಗೆ ರಾಷ್ಟ್ರೀಯ ಭದ್ರತೆಯಲ್ಲಿ ಮಹತ್ವದ ಕೊಡುಗೆ ನೀಡುತ್ತಿದೆ. ಅದು ಇನ್ನಷ್ಟು ಮುಂದುವರೆಯಲಿ ಎಂದು ತಿಳಿಸಿದರು. ರಕ್ಷಣಾ ಲೆಕ್ಕಪತ್ರಗಳ ಮಹಾ ನಿಯಂತ್ರಕ ಡಾ.ಮಯಾಂಕ್ ಶರ್ಮ ಮಾತನಾಡಿ ಎರಡು ದಿನಗಳ ಕಾಲ ನಡೆದ ಸಮ್ಮೇಳನದಲ್ಲಿ ಹಲವು ಮಹತ್ವದ ವಿಷಯಗಳ ಕುರಿತು ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದರು. ೨೦೪೭ಕ್ಕೆ ವಿಕಸಿತ ಭಾರತದ ಗುರಿ ಹಾಕಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪಕ್ಕೆ ಪೂರಕವಾಗಿ ಸಶಸ್ತ್ರ ಪಡೆಗಳನ್ನು

ಆತ್ಮನಿರ್ಭರಗೊಳಿಸುವ ನಿಟ್ಟಿನಲ್ಲಿ ಕೆಲಸ ನಡೆಯುತ್ತಿದೆ. ಜೊತೆಗೆ ಸಚಿವಾಲಯಕ್ಕೆ ಮತ್ತಷ್ಟು ಬಲ ತುಂಬಿಸುವ ಕೆಲಸ ನಡೆಯುತ್ತಿದೆ ಎಂದು ಹೇಳಿದರು.

<><*<><>*><>

ಮಡಿಕೇರಿಯ ಬಿಜೆಪಿ ಕಾರ್ಯಕರ್ತನ ಆತ್ಮಹತ್ಯೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡೆತ್‌ನೋಟ್‌ನಲ್ಲಿ ಶಾಸಕ ಪೊನ್ನಣ್ಣ ಅವರ ಹೆಸರನ್ನು ಮೃತ ಉಲ್ಲೇಖಿಸಿದ್ದು, ಶಾಸಕರಾದ ಪೊನ್ನಣ್ಣ, ಮಂತರ್ ಗೌಡ ಮತ್ತು ಆರೋಪಿತ ತನ್ವೀರ್ ಮೈನಾ ಅವರ ಹೆಸರನ್ನು ಎಫ್‌ಐಆರ್ ನಲ್ಲಿ ಸೇರಿಸಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ವಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಪ್ರಕರಣ ಕುರಿತು ಸೂಕ್ತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

<><*<><>*><>

ಚಿಲಿ ಗಣರಾಜ್ಯದ ಅಧ್ಯಕ್ಷ ಗ್ರಾಬ್ರಿಯಲ್ ಬೋರಿಕ್ ಫಾಂಟ್ ಅವರು, ಎರಡು ದಿನಗಳ ಬೆಂಗಳೂರು ಪ್ರವಾಸ ಕೈಗೊಂಡಿದ್ದು, ಇಂದು ಮಧ್ಯಾಹ್ನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದರು. ಅವರನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸ್ವಾಗತಿಸಿದರು. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿ ಜಿ.ಸತ್ಯವತಿ, ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್, ಪೊಲೀಸ್ ಆಯುಕ್ತ ಬಿ.ದಯಾನಂದ ಮತ್ತಿತರ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

<><*<><>*><>

ಮಂಗಳೂರು ಹೈಕೋರ್ಟ್ ಪೀಠ ರಚನೆ ಬಗ್ಗೆ ಪೂರಕ ಸಿದ್ಧತೆಗಳು ನಡೆಯುತ್ತಿದೆ ಎಂದು ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಿ.ವೇದವ್ಯಾಸ್ ಕಾಮತ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಇದೇ ಮೊದಲ ಬಾರಿಗೆ ಬಾರ್ ಅಸೋಸಿಯೇಷನ್ ಚಟುವಟಿಕೆಗೆ ರೂಪಿಸಲಾದ ಪ್ರತ್ಯೇಕ ಆಪ್‌ನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಮಂಗಳೂರಿನಲ್ಲಿ ಹೈಕೋರ್ಟ್ ಪೀಠ ಸ್ಥಾಪೆಯಾಗಬೇಕೆಂಬ ಆಗ್ರಹ ಹಿಂದಿನಿಂದಲೂ ಇದೆ. ಇಲ್ಲಿ ಪೀಠ ಸ್ಥಾಪನೆಯಾದರೆ ಮಂಗಳೂರು, ಉಡುಪಿ, ಶಿವಮೊಗ್ಗ ಭಾಗದ ಜನತೆಗೆ ಅನುಕೂಲವಾಗಲಿದೆ ಎಂದರು. ದಕ್ಷಿಣ ಕನ್ನಡ ಜಿಲ್ಲಾ ಹಿರಿಯ ಹೆಚ್ಚುವರಿ ಮತ್ತು ಸೆಶನ್ಸ್ ನ್ಯಾಯಾಧೀಶ ಎಚ್.ಎಸ್.ಮಲ್ಲಿಕಾರ್ಜುನ ಸ್ವಾಮಿ ಮಾತನಾಡಿ, ದೇಶದಲ್ಲಿ ತಿದ್ದುಪಡಿಯಾದ ಹಲವು ಕಾನೂನುಗಳು, ಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ಗಳ ಸೂಚನೆಗಳು ಕೆಲವೊಮ್ಮೆ ನ್ಯಾಯಾಧೀಶರಿಗೆ ತಲುಪುತ್ತಿಲ್ಲ. ಹೀಗಾಗಿ ಈ ಆಪ್‌ನಲ್ಲಿ ಅಂತಹ ವಿಚಾರಗಳನ್ನೂ ಅಳವಡಿಸಬೇಕು. ಆಪ್ ಮೂಲಕ ಕಾನೂನು ತಿಳಿಸುವ ಕೆಲಸವಾಗಬೇಕು. ಇದರಿಂದ ತ್ವರಿತ ನ್ಯಾಯದಾನ ಸಾಧ್ಯ ಎಂದರು. ನೂತನ ಆಪ್‌ನಲ್ಲಿ ಸದಸ್ಯತ್ವನ ನೋಂದಣಿ, ಪರಿಶೀಲನೆ, ಖರ್ಚು ವೆಚ್ಚ, ನೇರ ಶುಲ್ಕ ಪಾವತಿ ಸೇರಿದಂತೆ ಅನೇಕ ವ್ಯವಸ್ಥೆಗಳು ಇರಲಿದೆ.

<><*<><>*><>

ಉನ್ನತ ಶಿಕ್ಷಣ ಸಚಿವ ಡಾ. ಎಂ. ಸಿ. ಸುಧಾಕರ್ ಅವರು ನಾಳೆ ಚಿಕ್ಕಬಳ್ಳಾಪುರ ಜಿಲ್ಲೆಯ ವಿವಿಧೆಡೆ ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಿದ್ದಾರೆ. ಗುಂಡಿಬಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ೭ ಕೋಟಿ ರೂಪಾಯಿ ವೆಚ್ಚದ ಕಾಮಗಾರಿ ಹಾಗೂ ಬಾಗೇಪಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ೩ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಪ್ರಧಾನ ಮಂತ್ರಿ ಇಂಟರ್ನ್ ಶಿಪ್ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು **www.pmintership.mca.gov.in** ಪೋರ್ಟಲ್ ಮೂಲಕ ಏಪ್ರಿಲ್ ೧೫ ರೊಳಗಾಗಿ ಅರ್ಜಿ ಸಲ್ಲಿಸಬಹುದು. ಇಂಟರ್ಶಿಪ್ ಪೂರ್ಣಗೊಂಡ ನಂತರ ಅರ್ಹತೆ ಆಧಾರದ ಮೇಲೆ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಗುತ್ತದೆ. ಅಲ್ಲದೇ ೬ ಸಾವಿರ ರೂಪಾಯಿ ಭತ್ಯೆಯನ್ನು ಅಭ್ಯರ್ಥಿಯ ಬ್ಯಾಂಕ್ ಖಾತೆಗೆ ಸಂದಾಯಮಾಡಲಾಗುವುದು.. ಆಸಕ್ತರು ತಮ್ಮ ಹೆಸರು ನೋಂದಾಯಿಸಿಕೊಂಡು ಇಂಟರ್ನ್‌ಶಿಪ್ ಪ್ರಯೋಜನ ಪಡೆಯಬೇಕಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

೫ನೇ ರಾಜ್ಯ ಹಣಕಾಸು ಆಯೋಗ ಇದೇ ೭ ರಂದು ಚಿತ್ರದುರ್ಗ ಜಿಲ್ಲೆಗೆ ಭೇಟಿ ನೀಡಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಈ ಕುರಿತು ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಹಾಗೂ ಶಿವಮೊಗ್ಗ ಜಿಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಕುರಿತಂತೆ ಆಯೋಗ ಸಭೆ ನಡೆಸಲಿದ್ದು, ಜಿಲ್ಲೆಯ ಅಧಿಕಾರಿಗಳು ಉತ್ತಮ ಪ್ರಾತ್ಯಕ್ಷಿಕೆಯೊಂದಿಗೆ ನಿಖರ ಮಾಹಿತಿ ನೀಡುವಂತೆ ಸೂಚಿಸಿದರು.

**<><*<><>*><>**

ಕಲಬುರಗಿ ಹೈಕೋರ್ಟ್ ಪೀಠವು ನಾರಾಯಣಪುರ ಜಲಾಶಯದಿಂದ ಕಾಲುವೆಗೆ ನೀರು ಹರಿಸುವಂತೆ ಆದೇಶ ನೀಡಿದರೂ ರಾಜ್ಯ ಸರ್ಕಾರ ಈ ಆದೇಶದ ಬಗ್ಗೆ ಮೇಲ್ಮನವಿ ಸಲ್ಲಿಸಿ ತಡೆಯಾಜ್ಞೆ ತಂದಿದೆ ಎಂದು ಮಾಜಿ ಸಚಿವ ನರಸಿಂಹ ನಾಯಕ್ ಆರೋಪಿಸಿದ್ದಾರೆ. ಯಾದಗಿರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತೆಲಂಗಾಣಕ್ಕೆ ಜಲಾಶಯದಿಂದ ನೀರು ಹರಿಸಲು ಕಾಳಜಿ ವಹಿಸಿದ ರಾಜ್ಯ ಸರ್ಕಾರ ವಿಶೇಷವಾಗಿ ನಾರಾಯಣಪುರ ಜಲಾಶಯ ವ್ಯಾಪ್ತಿಯ ರೈತರ ಬಗ್ಗೆ ನಿರ್ಲಕ್ಷ್ಯ ವಹಿಸಿದೆ ಎಂದು ದೂರಿದರು.

**<><*<><>*><>**

ಗ್ರಾಮ ಪಂಚಾಯತಿ, ಹೋಬಳಿ ಮಟ್ಟದಲ್ಲಿ ಹವಾಮಾನ ಮತ್ತು ಮಳೆಮಾಪನ ಕೇಂದ್ರಗಳನ್ನು ಅಳವಡಿಸಿದರೆ ಯೋಗ್ಯ ಬೆಳೆಗಳಿಗೆ ’ಪ್ರಧಾನ ಮಂತ್ರಿ ಬೆಳೆವಿಮೆ’ಯನ್ನು ಪಾವತಿಸಲು ಅನುಕೂಲವಾಗಲಿದೆ ಎಂದು ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್, ಕೇಂದ್ರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಅವರಲ್ಲಿ ಮನವಿ ಮಾಡಿದ್ದಾರೆ. **£À**ನವದೆಹಲಿಯಲ್ಲಿಂದು ಸಚಿವರನ್ನು ಭೇಟಿಯಾದ ಜಗದೀಶ್ ಶೆಟ್ಟರ್, ಗ್ರಾಮ ಪಂಚಾಯತಿ ಹಾಗೂ ಹೋಬಳಿ ಮಟ್ಟದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹವಾಮಾನ ಕೇಂದ್ರಗಳು ಮತ್ತು ಮಳೆ ಮಾಪನ ಕೇಂದ್ರಗಳನ್ನು ಹೊರತು ಪಡಿಸಿ ಇನ್ನು ಹೆಚ್ಚಿನ ಪ್ರಮಾಣದಲ್ಲಿ ಸ್ಥಾಪಿಸುವಂತೆ ಕೋರಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಮನ್ರೇಗಾ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವಂತೆ ಸಚಿವರಲ್ಲಿ ಮನವಿ ಮಾಡಲಾಗಿದೆ ಎಂದು ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.

**<><*<><>*><>**

ಭಾರತದಲ್ಲಿನ ಪರಾಗ್ವೆ ರಾಯಭಾರಿ ಫ್ಲೆಮಿಂಗ್ ಡುವಾರ್ಟೆ ಹಾಗೂ ಕಾಂಬೋಡಿಯ ಕೌನ್ಸುಲ್ ಕಾರ್ತಿಕ್ ತಲ್ಲಂ ನೇತೃತ್ವದ ನಿಯೋಗ ಇಂದು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಜ್ಞಾನಜ್ಯೋತಿ ಕ್ಯಾಂಪಸ್ ಗೆ ಭೇಟಿ ನೀಡಿ, ಶೈಕ್ಷಣಿಕ ಸಹಭಾಗಿತ್ವ ಕುರಿತು ವಿಚಾರ ವಿನಿಮಯ ನಡೆಸಿತು.

ಬಿಸಿಯು ಸಿಂಡಿಕೇಟ್ ಸದಸ್ಯ ಡಾ.ಬಿ.ಆರ್.ಸುಪ್ರೀತ್ ಅವರ ಆಹ್ವಾನದ ಮೇರೆಗೆ ಇಂದು ಸೆಂಟ್ರಲ್ ಕಾಲೇಜಿನ ಆವರಣಕ್ಕೆ ಆಗಮಿಸಿದ ನಿಯೋಗವನ್ನು ಕುಲಪತಿ ಪ್ರೊಫೆಸರ್ ಲಿಂಗರಾಜ ಗಾಂಧಿ ಆತ್ಮೀಯವಾಗಿ ಸ್ವಾಗತಿಸಿ ಬರಮಾಡಿಕೊಂಡರು.

ವಿಶ್ವವಿದ್ಯಾನಿಲಯದ ಆಡಳಿತ ವರ್ಗ ಹಾಗೂ ಹಿರಿಯ ಪ್ರಾಧ್ಯಾಪಕರೊಂದಿಗೆ ಚರ್ಚೆ ನಡೆಸಿದ ನಿಯೋಗವು ಶೈಕ್ಷಣಿಕ ಮತ್ತು ಸಂಶೋಧನಾ ಸಹಯೋಗದ ಅವಕಾಶಗಳ ಕುರಿತು ಪರಾಮರ್ಶಿಸಿತು.

<><*<><>*><>

ರಾಜ್ಯದ ಕರಾವಳಿಯ ಕೆಲವೆಡೆ ಹಾಗೂ ಒಳನಾಡಿನ ಹಲವೆಡೆ ಮಳೆಯಾಗಿದೆ.  ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರದಲ್ಲಿ ಅತಿ ಹೆಚ್ಚು ೯ ಸೆಂಟಿಮೀಟರ್, ಕಲಬುರಿಗಿಯ ಚಿತ್ತಾಪುರದಲ್ಲಿ ೭ ಸೆಂಟಿಮೀಟರ್ ಮಳೆಯಾಗಿದೆ ಮುಂದಿನ ಎರಡು ದಿನಗಳಲ್ಲಿ ರಾಜ್ಯದ ಉತ್ತರಕನ್ನಡ, ಉಡುಪಿ, ದಕ್ಷಣಕನ್ನಡ, ವಿಜಯಪುರ ಬೆಳಗಾವಿ, ಧಾರವಾಡ, ಬಾಗಲಕೋಟೆ ಮತ್ತು ಹಾವೇರಿ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಹಗುರುದಿಂದ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>